VOLUME: 16 | 02 JULY 2026 | ಗುರುವಾರ | RS: 2 | PAGE: 06 ISSUE: 141 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ಆಲಿಯಾ ಭಟ್ ಅವರು ಸಂಪೂರ್ಣಆಕ್ಷನ್ ಅವತಾರ ತಾಳಿರುವ 'ಆಲ್ಫಾ' ಸಿನಿಮಾ ಜುಲೈ 3ರಂದು ರಿಲೀಸ್ ಆಗಲಿದೆ. ಈ ಸಿನಿಮಾಗೆ ಸೆನ್ಸಾರ್ ಪಕ್ರಿಯೆ ಮುಗಿದಿದ್ದು, ಒಂದಷ್ಟು ಬದಲಾವಣೆಗಳನ್ನು ಸೂಚಿಸಲಾಗಿದೆ. ಹಿಂಸಾತ್ಮಕ ದೃಶ್ಯಗಳ ತೀವ್ರತೆಯನ್ನು ಕಡಿಮೆ ಮಾಡಲು 'ಆಲ್ಫಾ' ಚಿತ್ರತಂಡಕ್ಕೆ ಸೂಚನೆ ನೀಡಲಾಗಿದೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಕನ್ನಡ ಚಿತ್ರರಂಗ ಉಳಿವಿಗೆ ನೆರವಿನ ಭರವಸೆ



ಬೆಂಗಳೂರು: ಕನ್ನಡ ಚಿತ್ರರಂಗದ ಅಭಿವೃದ್ಧಿ ಮತ್ತು ಉಳಿವಿಗಾಗಿ ಸಮಗ್ರ ಹೊಸ ಚಲನಚಿತ್ರ ನೀತಿ ರೂಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಚಲನಚಿತ್ರ ವಾಣಿಜ್ಯ ಮಂಡಳಿ ಸಲ್ಲಿಸಿದ ಮನವಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಸರ್ಕಾರದಿಂದ ಸಾಧ್ಯವಾದ ನೆರವು ನೀಡುವ ಭರವಸೆ ನೀಡಿದ್ದಾರೆ.

ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ ಡಾ. ಜಯಮಾಲ ಅವರ ನೇತೃತ್ವದಲ್ಲಿ ಮಂಡಳಿಯ ಪದಾಧಿಕಾರಿಗಳು ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ, ಹೊಸ ಚಲನಚಿತ್ರ ನೀತಿ ಜಾರಿ, ಸರ್ಕಾರಿ ಓಟಿಟಿ ವೇದಿಕೆ ಆರಂಭ, ಚಲನಚಿತ್ರ ಪ್ರಾಚ್ಯಾಗಾರ (ಆರ್ಕೈವ್) ಸ್ಥಾಪನೆ, ಸಹಾಯಧನ ಹೆಚ್ಚಳ, ಸಿನಿಮಾಟೋಗ್ರಫಿ ಕಾಯ್ದೆ ತಿದ್ದುಪಡಿ, ಏಕಪರದೆ ಚಿತ್ರಮಂದಿರಗಳ ನವೀಕರಣ ಹಾಗೂ ಚಿತ್ರರಂಗದವರಿಗೆ ವಸತಿ ನಿರ್ಮಾಣಕ್ಕಾಗಿ ಬಿಡಿಎ ವತಿಯಿಂದ ಐದು ಎಕರೆ ಭೂಮಿ ಮಂಜೂರು ಮಾಡುವಂತೆ ಮನವಿ ಸಲ್ಲಿಸಿದರು.

ಮನವಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಕನ್ನಡ ಚಿತ್ರರಂಗದ ಅಭಿವೃದ್ಧಿಗೆ ಅಗತ್ಯ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು. ಹೊಸ ಚಲನಚಿತ್ರ ನೀತಿ ರೂಪಿಸುವ ಬಗ್ಗೆ ಚರ್ಚೆ ನಡೆಸುವುದು, ಸಹಾಯಧನ ಹೆಚ್ಚಳ, ಚಲನಚಿತ್ರ ಪ್ರಾಚ್ಯಾಗಾರ ಸ್ಥಾಪನೆ, ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರಕ್ರಿಯೆ ಆರಂಭಿಸುವುದು ಹಾಗೂ ಚಿತ್ರನಗರಿ ನಿರ್ಮಾಣಕ್ಕೆ ಘೋಷಿತ ಅನುದಾನ ಬಿಡುಗಡೆ ಕುರಿತಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು.

ಬಿಡಿಎ ವತಿಯಿಂದ ಐದು ಎಕರೆ ಭೂಮಿ ಮಂಜೂರು ಮಾಡುವ ಬೇಡಿಕೆ ಕುರಿತು ಕೂಡ ಸರ್ಕಾರ ಯಾವ ರೀತಿಯಲ್ಲಿ ನೆರವು ನೀಡಬಹುದು ಎಂಬ ಬಗ್ಗೆ ಪರಿಶೀಲಿಸಲಾಗುವುದು ಎಂದು ಹೇಳಿದರು.

ವಾಣಿಜ್ಯ ಮಂಡಳಿ ಸಲ್ಲಿಸಿದ ಮನವಿ ಪತ್ರದಲ್ಲಿ, 2011ರಲ್ಲಿ ರೂಪುಗೊಂಡ ಚಲನಚಿತ್ರ ನೀತಿಯನ್ನು ಇಂದಿಗೂ ಅನುಸರಿಸಲಾಗುತ್ತಿದ್ದು, ಕಳೆದ 15 ವರ್ಷಗಳಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳಾಗಿರುವ ಹಿನ್ನೆಲೆಯಲ್ಲಿ ಹೊಸ ನೀತಿ ಅಗತ್ಯವಾಗಿದೆ ಎಂದು ಉಲ್ಲೇಖಿಸಲಾಗಿದೆ.

ಹೊಸ ಚಲನಚಿತ್ರ ನೀತಿಯಲ್ಲಿ ಓಟಿಟಿ ಮತ್ತು ಡಿಜಿಟಲ್ ವಿತರಣಾ ವ್ಯವಸ್ಥೆ, ಕೃತಕ ಬುದ್ಧಿಮತ್ತೆ (ಎಐ) ಬಳಕೆ, ಕನ್ನಡ ಚಿತ್ರರಂಗದ ರಕ್ಷಣೆ, ಸಣ್ಣ ಚಿತ್ರಗಳಿಗೆ ಪ್ರೋತ್ಸಾಹ, ಚಿತ್ರಮಂದಿರಗಳ ಉಳಿವು, ಕಲಾವಿದರು ಹಾಗೂ ಕಾರ್ಮಿಕರ ಕಲ್ಯಾಣ, ಚಲನಚಿತ್ರ ಶಿಕ್ಷಣ ಮತ್ತು ಪ್ರಾಚ್ಯಾಗಾರ, ಜಾಗತಿಕ ಮಾರುಕಟ್ಟೆ ವಿಸ್ತರಣೆ ಸೇರಿದಂತೆ ಹಲವು ಅಂಶಗಳನ್ನು ಒಳಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

ಪ್ರತಿವರ್ಷ 250ಕ್ಕೂ ಹೆಚ್ಚು ಕನ್ನಡ ಚಿತ್ರಗಳು ಬಿಡುಗಡೆಯಾಗುತ್ತಿದ್ದು, ಬಹುರಾಷ್ಟ್ರೀಯ ಓಟಿಟಿ ವೇದಿಕೆಗಳು ಸಣ್ಣ ಬಜೆಟ್ ಚಿತ್ರಗಳನ್ನು ಖರೀದಿಸಲು ಮುಂದೆ ಬರುತ್ತಿಲ್ಲ. ಆದ್ದರಿಂದ ಸರ್ಕಾರದ ವತಿಯಿಂದಲೇ ವಿಶೇಷ ಓಟಿಟಿ ವೇದಿಕೆಯನ್ನು ಆರಂಭಿಸಿದರೆ ಕನ್ನಡ ಚಿತ್ರರಂಗಕ್ಕೆ ನೆರವಾಗಲಿದೆ ಎಂದು ಮಂಡಳಿ ಅಭಿಪ್ರಾಯಪಟ್ಟಿದೆ.

ಸಿನಿಮಾಟೋಗ್ರಫಿ ಕಾಯ್ದೆಗೆ ತಿದ್ದುಪಡಿ ತಂದು ಚಿತ್ರಮಂದಿರಗಳ ಪರವಾನಗಿ ನವೀಕರಣಕ್ಕೆ ಏಕಗವಾಕ್ಷಿ ವ್ಯವಸ್ಥೆ ಜಾರಿಗೊಳಿಸಬೇಕು. ಹಿಂದೆ ರಾಜ್ಯದಲ್ಲಿ ಸುಮಾರು 1,200 ಚಿತ್ರಮಂದಿರಗಳಿದ್ದರೆ, ಈಗ ಅವುಗಳ ಸಂಖ್ಯೆ 400ಕ್ಕೆ ಇಳಿದಿದೆ. ಹೊಸ ಬಡಾವಣೆಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಚಿತ್ರಮಂದಿರ ನಿರ್ಮಾಣಕ್ಕೆ ವಿಶೇಷ ಪ್ರೋತ್ಸಾಹ ಹಾಗೂ ಮೂಲಸೌಕರ್ಯ ಒದಗಿಸಬೇಕು ಎಂದು ಮನವಿ ಮಾಡಲಾಗಿದೆ.

ಹಳೆಯ ಏಕಪರದೆ ಚಿತ್ರಮಂದಿರಗಳ ಆಧುನೀಕರಣಕ್ಕೆ ನೆರವು ನೀಡುವುದರ ಜೊತೆಗೆ ಶೇ.4 ಬಡ್ಡಿದರದಲ್ಲಿ ಸಾಲ ಸೌಲಭ್ಯ ಕಲ್ಪಿಸಬೇಕು ಎಂಬ ಬೇಡಿಕೆಯನ್ನೂ ಮಂಡಳಿ ಮುಂದಿಟ್ಟಿದೆ.

**ಪ್ರತಿವರ್ಷ 250ಕ್ಕೂ ಹೆಚ್ಚು ಕನ್ನಡ ಚಿತ್ರಗಳು ಬಿಡುಗಡೆಯಾಗುತ್ತಿದ್ದು, ಬಹುರಾಷ್ಟ್ರೀಯ ಓಟಿಟಿ ವೇದಿಕೆಗಳು ಸಣ್ಣ ಬಜೆಟ್ ಚಿತ್ರಗಳನ್ನು ಖರೀದಿಸಲು ಮುಂದೆ ಬರುತ್ತಿಲ್ಲ. ಆದ್ದರಿಂದ ಸರ್ಕಾರದ ವತಿಯಿಂದಲೇ ವಿಶೇಷ ಓಟಿಟಿ ವೇದಿಕೆಯನ್ನು ಆರಂಭಿಸಿದರೆ ಕನ್ನಡ ಚಿತ್ರರಂಗಕ್ಕೆ ನೆರವಾಗಲಿದೆ ಎಂದು ಮಂಡಳಿ ಅಭಿಪ್ರಾಯಪಟ್ಟಿದೆ. ಸಿನಿಮಾಟೋಗ್ರಫಿ ಕಾಯ್ದೆಗೆ ತಿದ್ದುಪಡಿ ತಂದು ಚಿತ್ರಮಂದಿರಗಳ ಪರವಾನಗಿ ನವೀಕರಣಕ್ಕೆ ಏಕಗವಾಕ್ಷಿ ವ್ಯವಸ್ಥೆ ಜಾರಿಗೊಳಿಸಬೇಕು.**

2025–26ನೇ ಸಾಲಿನ ಬಜೆಟ್‌ನಲ್ಲಿ ಚಲನಚಿತ್ರಗಳ ಪ್ರಾಚ್ಯಾಗಾರ ಕಾರ್ಯಕ್ಕಾಗಿ ಘೋಷಿಸಲಾದ 3 ಕೋಟಿ ರೂಪಾಯಿ ಅನುದಾನದಡಿ ಯಾವುದೇ ಕೆಲಸ ಆರಂಭವಾಗಿಲ್ಲ. 1934ರಿಂದ 2010ರವರೆಗೆ ಸೆಲ್ಯುಲಾಯ್ಡ್‌ನಲ್ಲಿ ನಿರ್ಮಾಣಗೊಂಡ 3 ಸಾವಿರಕ್ಕೂ ಹೆಚ್ಚು ಕನ್ನಡ ಚಿತ್ರಗಳ ಸಂರಕ್ಷಣೆಗೆ ಸರ್ಕಾರ ವಿಶೇಷ ಗಮನಹರಿಸಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಲಾಗಿದೆ.

2022ರಿಂದ ಬಾಕಿ ಉಳಿದಿರುವ ರಾಜ್ಯ ಚಲನಚಿತ್ರ ಪ್ರಶಸ್ತಿಗಳ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ, 2026ರಿಂದ ಪ್ರತಿವರ್ಷ ನಿಯಮಿತವಾಗಿ ಪ್ರಶಸ್ತಿ ಪ್ರದಾನ ಮಾಡಬೇಕು. ಡಾ. ರಾಜ್‌ಕುಮಾರ್ ಜನ್ಮದಿನವಾದ ಏಪ್ರಿಲ್ 24ರಂದು ಪ್ರಶಸ್ತಿ ಪ್ರದಾನ ಸಮಾರಂಭ ನಡೆಸಬೇಕು ಎಂಬ ಸಲಹೆಯನ್ನೂ ಮಂಡಳಿ ನೀಡಿದೆ.

ಮೈಸೂರಿನಲ್ಲಿ ನಿರ್ಮಾಣವಾಗಲಿರುವ ಚಿತ್ರನಗರಿಗೆ ಶಂಕುಸ್ಥಾಪನೆ ನೆರವೇರಿಸಿ, ಘೋಷಿತ 500 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಬೇಕು. ಕನ್ನಡ ಚಲನಚಿತ್ರಗಳಿಗೆ ನೀಡುತ್ತಿರುವ 10 ಲಕ್ಷ ರೂಪಾಯಿ ಸಹಾಯಧನದ ಮೊತ್ತವನ್ನು ಹೆಚ್ಚಿಸಬೇಕು ಎಂದು ಮನವಿ ಮಾಡಲಾಗಿದೆ.

ಇದೇ ವೇಳೆ, ಚಿತ್ರರಂಗದ ನಿರ್ಮಾಪಕರು, ವಿತರಕರು ಹಾಗೂ ಪ್ರದರ್ಶಕರಿಗಾಗಿ ಕಡಿಮೆ ದರದಲ್ಲಿ ವಸತಿ ಫ್ಲಾಟ್‌ಗಳನ್ನು ನಿರ್ಮಿಸಲು ಹೊಂಬಾಳೆ ಫಿಲಂಸ್ ಸಂಸ್ಥೆ ಮುಂದಾಗಿದ್ದು, ಈ ಯೋಜನೆಗಾಗಿ ಬಿಡಿಎ ವತಿಯಿಂದ ಐದು ಎಕರೆ ಭೂಮಿ ಮಂಜೂರು ಮಾಡಬೇಕೆಂದು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ.



ಬುಧವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರು, ರಾಮನಗರದ ರೈತ ಮುಖಂಡರು ಹಾಗೂ ಸಾರ್ವಜನಿಕರನ್ನು ಭೇಟಿಯಾಗಿ ಅವರ ಅಹವಾಲುಗಳನ್ನು ಆಲಿಸಿ ಅವರ ವಿವಿಧ ಬೇಡಿಕೆಗಳ ಕುರಿತು ಸಮಾಲೋಚನೆ ನಡೆಸಲಾಗಿದ್ದು, ಸಮಸ್ಯೆಗಳಿಗೆ ಸಕಾಲದಲ್ಲಿ ಸ್ಪಂದಿಸಲಾಗುವುದು ಎಂದು ಭರವಸೆ ನೀಡಿದರು.

# ಒತ್ತುವರಿ ತೆರವು

ಬೆಂಗಳೂರು: ನಗರದಲ್ಲಿ ಫುಟ್‌ಪಾತ್ ಮೇಲಿನ ಅಂಗಡಿಗಳ ತೆರವು ಕಾರ್ಯಾಚರಣೆ ವಿರೋಧಿಸಿ ಪ್ರತಿಭಟನೆ ನಡೆಸುವುದಾಗಿ ನವ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಕೇಶವಮೂರ್ತಿ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಕ್ರಮದ ವಿರುದ್ಧ ನಗರದ ಬೀದಿ ಬದಿ ವ್ಯಾಪಾರಿಗಳ 9 ಸಂಘಟನೆಗಳು ಜುಲೈ 9ರಂದು ಜಂಟಿಯಾಗಿ ಪ್ರತಿಭಟನೆ ನಡೆಸುವುದಾಗಿ ಅವರು ಎಚ್ಚರಿಸಿದ್ದಾರೆ.

ಏಕಾಏಕಿ ಬೀದಿ ಬದಿಯ ಅಂಗಡಿಗಳನ್ನು ತೆರವು ಮಾಡುವ ಮೂಲಕ ಅವುಗಳನ್ನೇ ನಂಬಿ ಜೀವನ ನಡೆಸುತ್ತಿರುವ ವ್ಯಾಪಾರಿಗಳ ಹೊಟ್ಟೆ ಮೇಲೆ ಹೊಡೆಯಲಾಗುತ್ತಿದೆ. ಚಿಕ್ಕವರಿಂದ ದೊಡ್ಡವರವರೆಗೂ ಫುಟ್‌ಪಾತ್ ಮೇಲೆ ಅಂಗಡಿ ನಡೆಸುತ್ತಿರುವ ವ್ಯಾಪಾರಿಗಳು ಇದ್ದಾರೆ. ಸರ್ಕಾರ ಬೀದಿ ಬದಿ ವ್ಯಾಪಾರಿಗಳ ಪರ ಯಾವ ಕೆಲಸವನ್ನೂ ಮಾಡಿಲ್ಲ. ಸರ್ಕಾರಕ್ಕೆ ನಮ್ಮ ಮೇಲೆ ಯಾಕೆ ಅನುಕಂಪವಿಲ್ಲ. ಹೀಗಾಗಿ, ಪರ್ಯಾಯ ಸ್ಥಳ ನಿಗದಿಪಡಿಸಿ ವ್ಯಾಪಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಕೇಶವಮೂರ್ತಿ ಆಗ್ರಹಿಸಿದ್ದಾರೆ.ನಗರದ ಹಲವು ಕಡೆಗಳಲ್ಲಿ ತೀವ್ರ ವಿರೋಧದ ನಡುವೆಯೂ ಪಾದಚಾರಿ ಮಾರ್ಗಗಳ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರೆದಿದೆ.



# 20ರಿಂದ ಸಂಸತ್ ಮುಂಗಾರು ಅಧಿವೇಶನ

ನವದೆಹಲಿ: ಸಂಸತ್ತಿನ ಮುಂಗಾರು ಅಧಿವೇಶನವು ಜುಲೈ 20ರಿಂದ ಆಗಸ್ಟ್ 13ರವರೆಗೆ ನಡೆಯುವ ಸಾಧ್ಯತೆ ಇದ್ದು, ಈ ಕುರಿತು ಕೇಂದ್ರ ಸರ್ಕಾರ ಶೀಘ್ರದಲ್ಲೇ ಅಧಿಕೃತ ಪ್ರಕಟಣೆ ಹೊರಡಿಸುವ ನಿರೀಕ್ಷೆಯಿದೆ. ಸುಮಾರು ನಾಲ್ಕು ವಾರಗಳ ಕಾಲ ನಡೆಯಲಿರುವ ಅಧಿವೇಶನದಲ್ಲಿ ಹಲವು ಮಹತ್ವದ ಮಸೂದೆಗಳು ಹಾಗೂ ರಾಷ್ಟ್ರೀಯ ವಿಚಾರಗಳ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ.

ಶೇ.33ರಷ್ಟು ಮೀಸಲಾತಿ ಕಲ್ಪಿಸುವ ಸಂವಿಧಾನ ತಿದ್ದುಪಡಿ ಮಸೂದೆ ಹಾಗೂ ಅದಕ್ಕೆ ಸಂಬಂಧಿಸಿದ ಕ್ಷೇತ್ರ ಪುನರ್‌ವಿಂಗಡನೆ ಮಸೂದೆಯನ್ನು ಕೇಂದ್ರ ಸರ್ಕಾರ ಮತ್ತೊಮ್ಮೆ ಮಂಡಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಈ ಮಸೂದೆಗಳು ಈ ಹಿಂದೆ ನಡೆದ ವಿಶೇಷ ಅಧಿವೇಶನದಲ್ಲಿ ಅಗತ್ಯ ಮೂರನೇ ಎರಡರಷ್ಟು ಬಹುಮತ ಪಡೆಯಲು ವಿಫಲವಾಗಿದ್ದವು. ಇದೀಗ ಕೆಲವು ವಿರೋಧ ಪಕ್ಷಗಳ ವಿಷಯಾಧಾರಿತ ಬೆಂಬಲದ ನಿರೀಕ್ಷೆಯೊಂದಿಗೆ ಸರ್ಕಾರ ಮತ್ತೊಮ್ಮೆ ಅವುಗಳನ್ನು ಅಂಗೀಕರಿಸಲು ಪ್ರಯತ್ನ ನಡೆಸುವ ಸಾಧ್ಯತೆ ಇದೆ. ಅಧಿವೇಶನದಲ್ಲಿ ರಾಜಕೀಯ ಬೆಳವಣಿಗೆಗಳೂ ಗಮನ ಸೆಳೆಯುವ ನಿರೀಕ್ಷೆಯಿದೆ. ತೃಣಮೂಲ ಕಾಂಗ್ರೆಸ್ (ಟಿಎಂಸಿ) ಹಾಗೂ ಶಿವಸೇನೆ (ಉದ್ಧವ್ ಬಾಳಾಸಾಹೇಬ್ ಠಾಕ್ರೆ) ಪಕ್ಷಗಳ ಕೆಲ ಸಂಸದರು ಪ್ರತ್ಯೇಕ ಗುಂಪುಗಳಾಗಿ ಗುರುತಿಸಬೇಕೆಂದು ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಈ ಕುರಿತಾಗಿ ಲೋಕಸಭಾ ಸ್ಪೀಕರ್ ಅವರ ನಿರ್ಧಾರಕ್ಕೂ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿದೆ.

# ರೈಲು ಕ್ರಾಸಿಂಗ್‌ನಲ್ಲಿ ಸಿಲುಕಿ ಪರದಾಡಿದ ಆನೆ

ರಾಮನಗರ: ಆಹಾರ ಮತ್ತು ನೀರಿನ ಹುಡುಕಾಟದಲ್ಲಿ ಕಾಡಿನಿಂದ ನಾಡಿನತ್ತ ಬಂದಿದ್ದ ಕಾಡಾನೆಯೊಂದು ರೈಲ್ವೆ ಹಳಿಯ ಪಕ್ಕದಲ್ಲಿ ನಿರ್ಮಿಸಲಾಗಿದ್ದ ಕಬ್ಬಿಣದ ಬ್ಯಾರಿಕೇಡ್‌ನಲ್ಲಿ ಸಿಲುಕಿ ತೀವ್ರವಾಗಿ ಪರದಾಡಿದ ಘಟನೆ ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನ ಅರೆಕೊಪ್ಪ ಗ್ರಾಮದ ಸಮೀಪ ನಡೆದಿದೆ.



ಅರೆಕೊಪ್ಪ ಗ್ರಾಮವು ಕಾವೇರಿ ವನ್ಯಜೀವಿ ವಲಯದ ಮುಗ್ಗೂರು ಅರಣ್ಯ ಪ್ರದೇಶದ ಅಂಚಿನಲ್ಲಿದ್ದು, ಇತ್ತೀಚಿನ ದಿನಗಳಲ್ಲಿ ಆಹಾರ ಮತ್ತು ನೀರಿನ ಕೊರತೆಯಿಂದ ಕಾಡುಪ್ರಾಣಿಗಳು ಗ್ರಾಮಗಳತ್ತ ಬರುತ್ತಿರುವ ಘಟನೆಗಳು ಹೆಚ್ಚುತ್ತಿವೆ. ಇದೇ ವೇಳೆ ಮುಗ್ಗೂರು ಅರಣ್ಯದಿಂದ ಹೊರಬರಲು ಯತ್ನಿಸಿದ ಕಾಡಾನೆ, ಆನೆಗಳ ನುಗ್ಗುವಿಕೆಯನ್ನು ತಡೆಯಲು ರೈಲ್ವೆ ಹಳಿಯ ಪಕ್ಕದಲ್ಲಿ ನಿರ್ಮಿಸಿದ್ದ ಕಬ್ಬಿಣದ ಬ್ಯಾರಿಕೇಡ್‌ನ ಕಂಬಗಳ ನಡುವೆ ಸಿಲುಕಿಕೊಂಡಿದೆ.

ದೇಹವು ಕಬ್ಬಿಣದ ಕಂಬಗಳ ಮಧ್ಯೆ ಸಿಲುಕಿದ್ದರಿಂದ ಆನೆಗೆ ಮುಂದೆ ಸಾಗಲೂ ಸಾಧ್ಯವಾಗದೇ, ಹಿಂದಕ್ಕೆ ಸರಿಯಲೂ ಆಗದೆ ತೀವ್ರವಾಗಿ ನರಳಾಡಿದೆ. ಅದರ ಕಿರುಚಾಟವನ್ನು ಕೇಳಿದ ಸ್ಥಳೀಯ ಗ್ರಾಮಸ್ಥರು ತಕ್ಷಣವೇ ಸ್ಥಳಕ್ಕೆ ಧಾವಿಸಿ ಕಾವೇರಿ ವನ್ಯಜೀವಿ ವಿಭಾಗದ ಅರಣ್ಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಮಾಹಿತಿ ಪಡೆದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿಯನ್ನು ಪರಿಶೀಲಿಸಿದ್ದಾರೆ. ಆನೆಗೆ ಯಾವುದೇ ಗಾಯವಾಗದಂತೆ ಸುರಕ್ಷಿತವಾಗಿ ಬ್ಯಾರಿಕೇಡ್‌ನಿಂದ ಹೊರತೆಗೆದುಕೊಳ್ಳಲು ಜೆಸಿಬಿ ಮತ್ತು ಗ್ಯಾಸ್ ಕಟರ್‌ಗಳ ಸಹಾಯದಿಂದ ರಕ್ಷಣಾ ಕಾರ್ಯಾಚರಣೆ ನಡೆಸಲು ಸಿದ್ಧತೆ ಕೈಗೊಳ್ಳಲಾಗಿದೆ.

ಘಟನೆ ನಡೆದ ಸ್ಥಳದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದು, ರಕ್ಷಣಾ ಕಾರ್ಯಾಚರಣೆಯನ್ನು ಸುಗಮವಾಗಿ ನಡೆಸಲು ಅರಣ್ಯ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ.

# ಆಕರ್ಷಣೀಯ ಸುದ್ದಿಗಳೇ ಹೆಚ್ಚು ಪ್ರಾಧಾನ್ಯತೆ ಪಡೆಯುತ್ತಿವೆ: ದಿನೇಶ್ ಗುಂಡೂರಾವ್

ಬೆಂಗಳೂರು: ಸಾಮಾಜಿಕ ಜಾಲತಾಣಗಳ ಪ್ರಭಾವ ಹೆಚ್ಚಿದ ಬಳಿಕ ಮಾಧ್ಯಮ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳಾಗಿದ್ದು, ಇತ್ತೀಚಿನ ದಿನಗಳಲ್ಲಿ ಆಕರ್ಷಣೀಯ ಸುದ್ದಿಗಳೇ ಹೆಚ್ಚು ಪ್ರಾಧಾನ್ಯತೆ ಪಡೆಯುತ್ತಿವೆ. ಆದರೆ ಮಾನವೀಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಸುದ್ದಿಗಳಿಗೆ ಹೆಚ್ಚಿನ ಆದ್ಯತೆ ಸಿಗಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬೆಂಗಳೂರಿನ ಗಾಂಧೀಭವನದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾಧ್ಯಮ ವೃತ್ತಿ ಅತ್ಯಂತ ಶ್ರೇಷ್ಠವಾದದ್ದು. ಮಹಾತ್ಮ ಗಾಂಧಿ, ಜವಾಹರಲಾಲ್ ನೆಹರು ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರಂತಹ ಮಹನೀಯರು ಪತ್ರಿಕೋದ್ಯಮದ ಮೂಲಕ ಜನಸೇವೆ ಮತ್ತು ರಾಷ್ಟ್ರಸೇವೆಯಲ್ಲಿ ತೊಡಗಿಸಿಕೊಂಡಿದ್ದರು ಎಂದು ಸ್ಮರಿಸಿದರು.



ಮಾಧ್ಯಮವು ಸರ್ಕಾರ ಮತ್ತು ಜನರ ನಡುವಿನ ಪ್ರಮುಖ ಸೇತುವೆಯಾಗಿದ್ದು, ಜನರ ಅಭಿಪ್ರಾಯಗಳನ್ನು ಸರ್ಕಾರಕ್ಕೆ ತಲುಪಿಸುವುದು ಹಾಗೂ ಸರ್ಕಾರದ ನೀತಿ–ನಿಯಮಗಳನ್ನು ಜನರಿಗೆ ತಲುಪಿಸುವ ಜವಾಬ್ದಾರಿಯನ್ನು ನಿರ್ವಹಿಸುತ್ತದೆ. ಮಾಧ್ಯಮ ಯಾವುದೇ ಒತ್ತಡಕ್ಕೆ ಮಣಿಯದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಸಮಾಜ ಮತ್ತು ವ್ಯವಸ್ಥೆಗೆ ಒಳಿತಾಗುತ್ತದೆ ಎಂದು ಹೇಳಿದರು.

ಕಳೆದ ಒಂದು ದಶಕದಲ್ಲಿ ಮಾಧ್ಯಮ ಕ್ಷೇತ್ರ ವೇಗವಾಗಿ ಬದಲಾಗಿದೆ. ಸಾಮಾಜಿಕ ಜಾಲತಾಣಗಳ ಆಗಮನದಿಂದ ನಿಜವಾದ ಸುದ್ದಿ ಮತ್ತು ಸುಳ್ಳು ಮಾಹಿತಿಯ ನಡುವಿನ ವ್ಯತ್ಯಾಸವನ್ನು ಗುರುತಿಸುವುದು ಸಾರ್ವಜನಿಕರಿಗೆ ಸವಾಲಿನ ವಿಷಯವಾಗಿದೆ. ಇಂದು ಬಹುತೇಕ ಎಲ್ಲರೂ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುವವರಾಗಿದ್ದು, ಸುದ್ದಿಗಿಂತ ಅಭಿಪ್ರಾಯಗಳಿಗೆ ಹೆಚ್ಚಿನ ಪ್ರಾಮುಖ್ಯತೆ ಸಿಗುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಭಿಪ್ರಾಯಪಟ್ಟರು.

ಮಾಧ್ಯಮ ಕ್ಷೇತ್ರದಲ್ಲಿ ವ್ಯಾಪಾರೀಕರಣ ಹೆಚ್ಚಾಗಿದ್ದು, ಹಲವಾರು ಉದ್ದಿಮೆದಾರರು ಮಾಧ್ಯಮ ಸಂಸ್ಥೆಗಳನ್ನು ತಮ್ಮ ವಶಕ್ಕೆ ಪಡೆಯುತ್ತಿರುವುದು ಪತ್ರಿಕಾ ಸ್ವಾತಂತ್ರ್ಯದ ಮೇಲೆ ಪರಿಣಾಮ ಬೀರುತ್ತಿದೆ. ಪತ್ರಿಕಾ ಸ್ವಾತಂತ್ರ್ಯ ಕುಸಿಯುತ್ತಿರುವುದಾಗಿ ವಿವಿಧ ಸಮೀಕ್ಷೆಗಳು ಸೂಚಿಸುತ್ತಿವೆ. ಆದಾಗ್ಯೂ ಪಾರದರ್ಶಕತೆ, ನಿಷ್ಪಕ್ಷಪಾತತೆ ಮತ್ತು ಜನಪರ ಬದ್ಧತೆಯನ್ನು ಉಳಿಸಿಕೊಂಡಿರುವ ಮಾಧ್ಯಮಗಳು ಸದಾಕಾಲ ಜನರ ವಿಶ್ವಾಸವನ್ನು ಗಳಿಸುತ್ತವೆ ಎಂದು ಹೇಳಿದರು.

ಪತ್ರಿಕಾ ದಿನಾಚರಣೆ ಅಂಗವಾಗಿ ರಾಜ್ಯದ ಎಲ್ಲಾ ಪತ್ರಕರ್ತರಿಗೆ ಶುಭಾಶಯಗಳನ್ನು ತಿಳಿಸಿದ ಅವರು, ಸಮಾಜಮುಖಿ ಪತ್ರಿಕೋದ್ಯಮದ ಅಗತ್ಯತೆಯನ್ನು ಒತ್ತಿಹೇಳಿದರು.

ಕಾರ್ಯಕ್ರಮದಲ್ಲಿ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಷಾ ಖಾನ್, ತೆಲಂಗಾಣ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಶ್ರೀನಿವಾಸ ರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಎಂ.ಎನ್. ಅನುಚೇತ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಮಳೆ ಮುನ್ಸೂಚನೆ: ಶಾಲೆ–ಕಾಲೇಜುಗಳಿಗೆ ರಜೆ

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಭಾರೀ ಮಳೆ ಮುಂದುವರಿದಿರುವ ಹಿನ್ನೆಲೆಯಲ್ಲಿ, ಜುಲೈ 2ರಂದು ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಈ ಹಿನ್ನೆಲೆ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲೆಯ ಎಲ್ಲಾ ಶಾಲೆ ಮತ್ತು ಕಾಲೇಜುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ.

ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಅವರು ಈ ಕುರಿತು ಆದೇಶ ಹೊರಡಿಸಿದ್ದು, ಜಿಲ್ಲೆಯ ಸರ್ಕಾರಿ, ಖಾಸಗಿ ಹಾಗೂ ಅನುದಾನಿತ ಶಾಲೆಗಳು ಮತ್ತು ಕಾಲೇಜುಗಳು ಜುಲೈ 2ರಂದು ಕಾರ್ಯನಿರ್ವಹಿಸುವುದಿಲ್ಲ.

ಭಾರತ ಸಾರಥಿ
02/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಭವಿಷ್ಯದ ವೈದ್ಯರನ್ನು ಸನ್ಮಾನಿಸಿದ ಆಕಾಶ್ ಎಜುಕೇಷನಲ್ ಸರ್ವೀಸಸ್

ಬೆಂಗಳೂರು

ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ, ದೇಶದ ಪ್ರಮುಖ ಪರೀಕ್ಷಾ ಪೂರ್ವಸಿದ್ಧತಾ ಸಂಸ್ಥೆಗಳಲ್ಲೊಂದಾದ ಆಕಾಶ್ ಎಜುಕೇಷನಲ್ ಸರ್ವೀಸಸ್ ಲಿಮಿಟೆಡ್ (ಎಇಎಸ್ಎಲ್) ವೈದ್ಯಕೀಯ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವ ತನ್ನ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಮೂಲಕ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿತು.



ಕಾರ್ಯಕ್ರಮದಲ್ಲಿ ದೇಶದ ವಿವಿಧ ವೈದ್ಯಕೀಯ ಕಾಲೇಜುಗಳಲ್ಲಿ ಎಂಬಿಬಿಎಸ್ ಅಧ್ಯಯನದ ಅಂತಿಮ ಹಂತದಲ್ಲಿರುವ ಹಾಗೂ ವೈದ್ಯಕೀಯ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮಾಜಿ ಆಕಾಶಿಯನ್ನರನ್ನು ಗೌರವಿಸಲಾಯಿತು. ಇದರ ಮೂಲಕ ಭಾರತದ ಆರೋಗ್ಯ ಕ್ಷೇತ್ರಕ್ಕೆ ಅರ್ಹ ವೈದ್ಯರನ್ನು ರೂಪಿಸುವಲ್ಲಿ ಸಂಸ್ಥೆ ಕಳೆದ 37 ವರ್ಷಗಳಿಂದ ನೀಡುತ್ತಿರುವ ಕೊಡುಗೆಯನ್ನು ಎತ್ತಿ ತೋರಿಸಲಾಯಿತು.

ಸುಮಾರು ನಾಲ್ಕು ದಶಕಗಳಿಂದ ವೈದ್ಯಕೀಯ ಪ್ರವೇಶ ಪರೀಕ್ಷೆಗಳ ತರಬೇತಿಯಲ್ಲಿ ತೊಡಗಿಸಿಕೊಂಡಿರುವ ಎಇಎಸ್ಎಲ್, ಇದುವರೆಗೆ 8 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣದ ಕನಸು ನನಸಾಗಿಸಲು ನೆರವಾಗಿದೆ. ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಯಶಸ್ಸು ಸಾಧಿಸಲು ಸಂಸ್ಥೆ ಪ್ರಮುಖ ಪಾತ್ರ ವಹಿಸಿದೆ.

ವೈದ್ಯರ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಂದ ಬಂದಿದ್ದ 15 ಮಂದಿ ಮಾಜಿ ಆಕಾಶಿಯನ್ನರು ಭಾಗವಹಿಸಿದ್ದರು. ಪ್ರಸ್ತುತ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ಎಂಬಿಬಿಎಸ್ ಅಧ್ಯಯನದ ಅಂತಿಮ ಹಂತದಲ್ಲಿರುವ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮವು ವಿದ್ಯಾರ್ಥಿಗಳ ಸಾಧನೆಯನ್ನು ಆಚರಿಸುವುದರ ಜೊತೆಗೆ, ಅವರ ಯಶಸ್ಸಿನ ಹಿಂದೆ ಶ್ರಮಿಸಿದ ಶಿಕ್ಷಕರ ಕೊಡುಗೆಯನ್ನು ಗುರುತಿಸುವ ವೇದಿಕೆಯಾಗಿಯೂ ಪರಿಣಮಿಸಿತು.

# ಮರ್ಕ್ ಜಾಗತಿಕ ಸಾಮರ್ಥ್ಯ ಕೇಂದ್ರ ಉದ್ಘಾಟನೆ

ಬೆಂಗಳೂರು

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ಮರ್ಕ್ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿ ತನ್ನ ಮರ್ಕ್ ಗ್ಲೋಬಲ್ ಕೇಪಬಿಲಿಟಿ ಸೆಂಟರ್ (ಎಂಜಿಸಿಸಿ) ಅನ್ನು ಉದ್ಘಾಟಿಸಿದೆ. ಈ ಹೊಸ ಕೇಂದ್ರವು ಸಂಸ್ಥೆಯ ಭಾರತದಲ್ಲಿನ ತಂತ್ರಜ್ಞಾನ ಮತ್ತು ಸೇವಾ ಕಾರ್ಯಾಚರಣೆಗಳನ್ನು ಒಂದೇ ವೇದಿಕೆಯಡಿ ಒಗ್ಗೂಡಿಸುವ ಮಹತ್ವದ ಹೆಜ್ಜೆಯಾಗಿದೆ.




17,000ಕ್ಕೂ ಹೆಚ್ಚು ಚದರ ಮೀಟರ್ ವಿಸ್ತೀರ್ಣದಲ್ಲಿ ನಿರ್ಮಾಣವಾಗಿರುವ ಈ ಆಧುನಿಕ ಕ್ಯಾಂಪಸ್‌ನಲ್ಲಿ 3,300ಕ್ಕೂ ಹೆಚ್ಚು ವೃತ್ತಿಪರರು ಕಾರ್ಯನಿರ್ವಹಿಸಲಿದ್ದು, ಡೇಟಾ, ಡಿಜಿಟಲ್, ತಂತ್ರಜ್ಞಾನ ಹಾಗೂ ಪ್ರಕ್ರಿಯಾ ನಿರ್ವಹಣಾ ಕ್ಷೇತ್ರಗಳಲ್ಲಿ ಜಾಗತಿಕ ಮಟ್ಟದ ಸೇವೆಗಳನ್ನು ಒದಗಿಸಲಿದ್ದಾರೆ.

ಎಲೆಕ್ಟ್ರಾನಿಕ್ ಸಿಟಿಯ ತಂತ್ರಜ್ಞಾನ ಕೇಂದ್ರಬಿಂದುವಿನಲ್ಲಿ ಸ್ಥಾಪನೆಯಾಗಿರುವ ಈ ಕ್ಯಾಂಪಸ್ ಆವಿಷ್ಕಾರ ಪ್ರಯೋಗಾಲಯಗಳು, ನ್ಯೂರೋಡೈವರ್ಸಿಟಿ ವಲಯಗಳು, ಸಹಯೋಗಾತ್ಮಕ ಕಾರ್ಯಕ್ಷೇತ್ರಗಳು ಹಾಗೂ ಆಧುನಿಕ ಸೌಲಭ್ಯಗಳೊಂದಿಗೆ ರೂಪುಗೊಂಡಿದ್ದು, ಭವಿಷ್ಯೋನ್ಮುಖ ಉದ್ಯೋಗ ಪರಿಸರವನ್ನು ಸೃಷ್ಟಿಸುವ ಉದ್ದೇಶ ಹೊಂದಿದೆ.

ಈ ಕೇಂದ್ರದಲ್ಲಿ ಎಂಟರ್‌ಪ್ರೈಸ್ ಸಲ್ಯೂಷನ್ಸ್, ಡೇಟಾ ಮತ್ತು ಕೃತಕ ಬುದ್ಧಿಮತ್ತೆ (ಎಐ), ಮಾಹಿತಿ ತಂತ್ರಜ್ಞಾನ, ಹೈಪರ್ ಆಟೊಮೇಷನ್, ವ್ಯವಹಾರ ತಂತ್ರಜ್ಞಾನ ಸಾಮರ್ಥ್ಯಗಳು ಹಾಗೂ ಸ್ಥಳೀಯ ಸಮೂಹ ಕಾರ್ಯಾಚರಣೆಗಳು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸಲಿವೆ.

# ವಿದ್ಯುತ್ ವಿತರಣಾ ಕ್ಷೇತ್ರಕ್ಕೆ ದುರ್ಬಲ ಸ್ಥಿತಿ: ಬ್ರಿಕ್ವರ್ಕ್ ರೇಟಿಂಗ್ಸ್

ಬೆಂಗಳೂರು

ದೇಶೀಯ ಕ್ರೆಡಿಟ್ ರೇಟಿಂಗ್ ಸಂಸ್ಥೆಯಾದ ಬ್ರಿಕ್ವರ್ಕ್ ರೇಟಿಂಗ್ಸ್ ತನ್ನ ಮೊದಲ ವಲಯವಾರು ಸಾಲದ ದೃಷ್ಟಿಕೋನ ವರದಿ "ಭಾರತದ ವಲಯವಾರು ಸಾಲದ ದೃಷ್ಟಿಕೋನ 2026" ಅನ್ನು ಬಿಡುಗಡೆ ಮಾಡಿದ್ದು, ಆರೋಗ್ಯ ಸೇವೆಗಳು ಹಾಗೂ ಗ್ರಾಹಕ ವಸ್ತುಗಳ ಕ್ಷೇತ್ರಗಳಿಗೆ ಸಕಾರಾತ್ಮಕ ಸಾಲದ ದೃಷ್ಟಿಕೋನ ವ್ಯಕ್ತಪಡಿಸಿದೆ.

ವರದಿಯ ಪ್ರಕಾರ, 2025ರಿಂದ 2030ರ ಅವಧಿಯಲ್ಲಿ ಗ್ರಾಹಕ ವಸ್ತುಗಳ ಕ್ಷೇತ್ರವು ಶೇ.17.3ರ ಸಂಯೋಜಿತ ವಾರ್ಷಿಕ ಬೆಳವಣಿಗೆ ದರ (ಅಂಉಖ) ದಾಖಲಿಸುವ ನಿರೀಕ್ಷೆಯಿದೆ. ಸಾಲ ವಿತರಣೆಯ ಹೆಚ್ಚಳ, ಜಿಎಸ್‌ಟಿ ದರಗಳ ಇಳಿಕೆ, ಟಿಯರ್–2 ಮತ್ತು ಟಿಯರ್–3 ನಗರಗಳಿಂದ ಹೆಚ್ಚುತ್ತಿರುವ ಬೇಡಿಕೆ ಹಾಗೂ ಪ್ರೀಮಿಯಂ ಉತ್ಪನ್ನಗಳತ್ತ ಗ್ರಾಹಕರ ಒಲವು ಈ ಬೆಳವಣಿಗೆಗೆ ಪ್ರಮುಖ ಕಾರಣಗಳಾಗಿವೆ.

ಆರೋಗ್ಯ ಸೇವೆಗಳ ಕ್ಷೇತ್ರವು ಬಲವಾದ ಬಡ್ಡಿ ಪಾವತಿ ಸಾಮರ್ಥ್ಯ, ಸಾಲ ಮರುಪಾವತಿ ಅನುಪಾತಗಳು, ಸುಮಾರು 13 ಬಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ವೈದ್ಯಕೀಯ ಪ್ರವಾಸೋದ್ಯಮ ಮಾರುಕಟ್ಟೆ ಮತ್ತು 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೂ ಆಯುಷ್ಮಾನ್ ಭಾರತ್ ಯೋಜನೆ ವಿಸ್ತರಣೆಯಿಂದ ಲಾಭ ಪಡೆಯುವ ನಿರೀಕ್ಷೆಯಿದೆ.

"ಭಾರತದ ವಲಯವಾರು ಸಾಲದ ದೃಷ್ಟಿಕೋನ 2026" ವರದಿಯು ಭಾರತದ 25 ಪ್ರಮುಖ ವಲಯಗಳ ಸಾಲದ ಗುಣಮಟ್ಟವನ್ನು ಸಮಗ್ರವಾಗಿ ವಿಶ್ಲೇಷಿಸುವ ಮೊದಲ ವಾರ್ಷಿಕ ವರದಿಯಾಗಿದೆ.

# ಗಂಗಾ ನಗರದಲ್ಲಿ ಹೊಸ ಮಳಿಗೆ ಆರಂಭಿಸಿದ ಡ್ರೈವ್‌ಎಕ್ಸ್ ಮೊಬಿಲಿಟಿ

ಬೆಂಗಳೂರು

ಪೂರ್ವ ಸ್ವಾಮ್ಯದ ದ್ವಿಚಕ್ರ ವಾಹನಗಳ ಖರೀದಿ ಮತ್ತು ಮಾರಾಟ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಡ್ರೈವ್‌ಎಕ್ಸ್ ಮೊಬಿಲಿಟಿ, ಬೆಂಗಳೂರಿನ ಗಂಗಾ ನಗರದಲ್ಲಿ ತನ್ನ ಹೊಸ ಕಂಪನಿ–ಮಾಲೀಕತ್ವದ ಹಾಗೂ ಕಂಪನಿ–ನಿರ್ವಹಿತ (ಸಿಒಸಿಒ) ಮಳಿಗೆಯನ್ನು ಆರಂಭಿಸಿದೆ.

ಈ ಹೊಸ ಮಳಿಗೆಯೊಂದಿಗೆ ಕರ್ನಾಟಕದಲ್ಲಿ ಸಂಸ್ಥೆಯ ಚಿಲ್ಲರೆ ವ್ಯಾಪಾರ ಜಾಲ ಮತ್ತಷ್ಟು ವಿಸ್ತಾರಗೊಂಡಿದ್ದು, ಬೆಂಗಳೂರಿನಲ್ಲಿ ಡ್ರೈವ್‌ಎಕ್ಸ್‌ನ ಏಳನೇ ಸಿಒಸಿಒ ಮಳಿಗೆಯಾಗಿ ಗುರುತಿಸಿಕೊಂಡಿದೆ. ವಿಶ್ವಾಸಾರ್ಹ ಹಾಗೂ ಗುಣಮಟ್ಟದ ಪೂರ್ವ ಸ್ವಾಮ್ಯದ ದ್ವಿಚಕ್ರ ವಾಹನಗಳನ್ನು ಗ್ರಾಹಕರಿಗೆ ಸುಲಭವಾಗಿ ತಲುಪಿಸುವ ಉದ್ದೇಶದೊಂದಿಗೆ ಸಂಸ್ಥೆ ತನ್ನ ಸಂಘಟಿತ ಚಿಲ್ಲರೆ ಜಾಲವನ್ನು ವೇಗವಾಗಿ ವಿಸ್ತರಿಸುತ್ತಿದೆ. ಪ್ರಸ್ತುತ ಡ್ರೈವ್‌ಎಕ್ಸ್ ಸಂಸ್ಥೆ ಕಂಪನಿ–ಮಾಲೀಕತ್ವದ ಮತ್ತು ಫ್ರಾಂಚೈಸಿ ಮಾದರಿಯ ಮಳಿಗೆಗಳ ಮೂಲಕ 50ಕ್ಕೂ ಹೆಚ್ಚು ಮಳಿಗೆಗಳ ಜಾಲವನ್ನು ನಿರ್ಮಿಸಿದ್ದು, ಹೊಸ ಮಳಿಗೆಯ ಆರಂಭ ಸಂಸ್ಥೆಯ ವಿಸ್ತರಣಾ ಯೋಜನೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ.




ಉತ್ತರ ಬೆಂಗಳೂರಿನ ವೇಗವಾಗಿ ಬೆಳೆಯುತ್ತಿರುವ ಪ್ರದೇಶವಾದ ಗಂಗಾ ನಗರದಲ್ಲಿ ಆರಂಭವಾಗಿರುವ ಈ ಮಳಿಗೆಯು ಕೈಗೆಟುಕುವ ಮತ್ತು ವಿಶ್ವಾಸಾರ್ಹ.

ಪೂರ್ವ ಸ್ವಾಮ್ಯದ ದ್ವಿಚಕ್ರ ವಾಹನಗಳ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುವ ಉದ್ದೇಶ ಹೊಂದಿದೆ.

ಗ್ರಾಹಕರಿಗೆ ಪಾರದರ್ಶಕ ಹಾಗೂ ಸುಗಮ ಖರೀದಿ ಅನುಭವವನ್ನು ನೀಡುವ ಸಲುವಾಗಿ ಮಳಿಗೆಯಲ್ಲಿ ಗುಣಮಟ್ಟದ ಭರವಸೆ, ಹಣಕಾಸು ಸೌಲಭ್ಯಗಳು, ಖಾತರಿ ಸೇವೆಗಳು ಹಾಗೂ ಖರೀದಿ ನಂತರದ ಬೆಂಬಲವನ್ನು ಒದಗಿಸಲಾಗುತ್ತದೆ.

ಹೊಸ ಮಳಿಗೆಯಲ್ಲಿ ವಿವಿಧ ಬ್ರ್ಯಾಂಡ್‌ಗಳು ಮತ್ತು ಮಾದರಿಗಳ ಗುಣಮಟ್ಟ–ಪರಿಶೀಲಿತ ಪೂರ್ವ ಸ್ವಾಮ್ಯದ ದ್ವಿಚಕ್ರ ವಾಹನಗಳು ಲಭ್ಯವಿದ್ದು, ಪ್ರತಿಯೊಂದು ವಾಹನವನ್ನು ಮಾರಾಟಕ್ಕೆ ಮುನ್ನ ಸಮಗ್ರ ತಪಾಸಣೆ ಹಾಗೂ ಗುಣಮಟ್ಟ ಪರಿಶೀಲನೆಗೆ ಒಳಪಡಿಸಲಾಗುತ್ತದೆ.

ಇದರ ಜೊತೆಗೆ, ಗ್ರಾಹಕರಿಗೆ ಸುಲಭ ಮಾಲೀಕತ್ವದ ಅನುಭವ ನೀಡಲು ವಿನಿಮಯ (ಎಕ್ಸ್‌ಚೇಂಜ್) ಸೌಲಭ್ಯ, ಹಣಕಾಸು ನೆರವು ಹಾಗೂ ಗ್ರಾಹಕ ಸಹಾಯ ಸೇವೆಗಳನ್ನೂ ಒದಗಿಸಲಾಗುತ್ತದೆ.


ಗಂಗಾ ನಗರ ಮಳಿಗೆಯ ಆರಂಭದೊಂದಿಗೆ ಡ್ರೈವ್‌ಎಕ್ಸ್ ಮೊಬಿಲಿಟಿ ಬೆಂಗಳೂರಿನಲ್ಲಿ ತನ್ನ ಅಸ್ತಿತ್ವವನ್ನು ಮತ್ತಷ್ಟು ಬಲಪಡಿಸಿಕೊಂಡಿದ್ದು, ಪೂರ್ವ ಸ್ವಾಮ್ಯದ ದ್ವಿಚಕ್ರ ವಾಹನ ಮಾರುಕಟ್ಟೆಯಲ್ಲಿ ಗ್ರಾಹಕ ವಿಶ್ವಾಸವನ್ನು ಹೆಚ್ಚಿಸುವತ್ತ ಮತ್ತೊಂದು ಹೆಜ್ಜೆ ಇಟ್ಟಿದೆ.

# ಹೊಸ ಸಿಯೆರಾ.ಇವಿ ಬಿಡುಗಡೆ

ಮುಂಬೈ

ಭಾರತದ ಪ್ರಮುಖ ವಿದ್ಯುತ್ ವಾಹನ ತಯಾರಕ ಸಂಸ್ಥೆಯಾದ ಟಾಟಾ ಇವಿ ತನ್ನ ಬಹುನಿರೀಕ್ಷಿತ ಸಿಯೆರಾ.ಇವಿ ಎಲೆಕ್ಟ್ರಿಕ್ ಎಸ್‌ಯುವಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿದೆ. ಐಕಾನಿಕ್ ಸಿಯೆರಾ ಮಾದರಿಯ ಆಧುನಿಕ ಅವತಾರವಾಗಿರುವ ಈ ವಾಹನವು ಅತ್ಯಾಧುನಿಕ ತಂತ್ರಜ್ಞಾನ, ಆಕರ್ಷಕ ವಿನ್ಯಾಸ ಮತ್ತು ಉನ್ನತ ಕಾರ್ಯಕ್ಷಮತೆಯೊಂದಿಗೆ ಮಾರುಕಟ್ಟೆಗೆ ಕಾಲಿಟ್ಟಿದೆ.

ಹೊಸ ಸಿಯೆರಾ.ಇವಿ ಒಂದು ಬಾರಿ ಪೂರ್ಣ ಚಾರ್ಜ್ ಮಾಡಿದರೆ 510 ರಿಂದ 530 ಕಿಲೋ ಮೀಟರ್‌ಗಳವರೆಗೆ ಸಿ75 ರಿಯಲ್–ವರ್ಲ್ಡ್ ರೇಂಜ್ ನೀಡಲಿದ್ದು, ದೀರ್ಘ ಪ್ರಯಾಣಕ್ಕೂ ಸೂಕ್ತವಾಗಿದೆ.



ವಾಹನದ ಹೈ–ವೋಲ್ಟೇಜ್ ಬ್ಯಾಟರಿಗೆ ಜೀವಮಾನದ ಖಾತರಿ ನೀಡಲಾಗಿದೆ. ಕಾರ್ಯಕ್ಷಮತೆಯ ದೃಷ್ಟಿಯಿಂದ ಸಿಯೆರಾ.ಇವಿ ಕೇವಲ 5.8 ಸೆಕೆಂಡುಗಳಲ್ಲಿ ಗಂಟೆಗೆ ಶೂನ್ಯದಿಂದ 100 ಕಿಲೋಮೀಟರ್ ವೇಗ ತಲುಪುವ ಸಾಮರ್ಥ್ಯ ಹೊಂದಿದ್ದು, ಎಲೆಕ್ಟ್ರಿಕ್ ಎಸ್‌ಯುವಿ ವಿಭಾಗದಲ್ಲಿ ಹೊಸ ಮಾನದಂಡವನ್ನು ಸ್ಥಾಪಿಸುವ ನಿರೀಕ್ಷೆಯಿದೆ. ವಿಶಿಷ್ಟ ವಿನ್ಯಾಸದೊಂದಿಗೆ ರೂಪುಗೊಂಡಿರುವ ಈ ಎಸ್‌ಯುವಿಯಲ್ಲಿ ಮುಂದಿನ ತಲೆಮಾರಿನ ವಿದ್ಯುತ್ ವಾಹನ ತಂತ್ರಜ್ಞಾನ, ಸ್ಮಾರ್ಟ್ ಡಿಜಿಟಲ್ ಅನುಭವಗಳು ಹಾಗೂ ಬುದ್ಧಿವಂತ ವೈಶಿಷ್ಟ್ಯಗಳನ್ನು ಅಳವಡಿಸಲಾಗಿದೆ.

ವಿಶಾಲ ಒಳಾಂಗಣ, ಆಧುನಿಕ ಸೌಲಭ್ಯಗಳು ಮತ್ತು ದೈನಂದಿನ ಬಳಕೆಗೆ ಅನುಕೂಲಕರ ವಿನ್ಯಾಸವು ಗ್ರಾಹಕರಿಗೆ ವಿಭಿನ್ನ ಅನುಭವ ನೀಡಲಿದೆ.

# ಮಲ್ಟಿ ಅಸೆಟ್ ಅಲೊಕೇಶನ್ ಫಂಡ್ ಬಿಡುಗಡೆ

ಬೆಂಗಳೂರು

ಜಾಗತಿಕ ಹೂಡಿಕೆ ಸಂಸ್ಥೆಯಾದ ಆಲ್ಫಾಗ್ರೆಪ್ ಗ್ರೂಪ್‌ನ ಭಾರತೀಯ ಮ್ಯೂಚುಯಲ್ ಫಂಡ್ ವಿಭಾಗವಾದ ಆಲ್ಫಾಗ್ರೆಪ್ ಮ್ಯೂಚುಯಲ್ ಫಂಡ್ ತನ್ನ ಮೊದಲ ನ್ಯೂ ಫಂಡ್ ಆಫರ್ (ಎನ್‌ಎಫ್‌ಒ) ಆಗಿರುವ ಆಲ್ಫಾಗ್ರೆಪ್ ಮಲ್ಟಿ ಅಸೆಟ್ ಅಲೊಕೇಶನ್ ಫಂಡ್ ಅನ್ನು ಬಿಡುಗಡೆ ಮಾಡಿದೆ. ಈ ಮೂಲಕ ಸಂಸ್ಥೆಯು ಭಾರತೀಯ ಮ್ಯೂಚುಯಲ್ ಫಂಡ್ ಮಾರುಕಟ್ಟೆಗೆ ಅಧಿಕೃತವಾಗಿ ಪ್ರವೇಶಿಸಿದೆ.



ಹೊಸ ಎನ್‌ಎಫ್‌ಒ ಜುಲೈ 6, 2026ರಿಂದ ಆರಂಭವಾಗಲಿದ್ದು, ಭಾರತೀಯ ಹೂಡಿಕೆದಾರರಿಗೆ ಪ್ರಾಮಾಣಿಕ, ವೈಜ್ಞಾನಿಕ ಹಾಗೂ ಚಲನಶೀಲ ಹೂಡಿಕೆ ತಂತ್ರವನ್ನು ಆಧರಿಸಿದ ಹೂಡಿಕೆ ಅವಕಾಶವನ್ನು ಒದಗಿಸಲಿದೆ.

ಈ ಯೋಜನೆಯು ಓಪನ್–ಎಂಡೆಡ್ ಮಲ್ಟಿ ಅಸೆಟ್ ಅಲೊಕೇಶನ್ ಫಂಡ್ ಆಗಿದ್ದು, ಷೇರುಗಳು, ಸ್ಥಿರ ಆದಾಯ ಸಾಧನಗಳು ಹಾಗೂ ಕಮಾಡಿಟಿಗಳಲ್ಲಿ ಹೂಡಿಕೆ ಮಾಡುವ ಮೂಲಕ ಹೂಡಿಕೆದಾರರಿಗೆ ಸಮತೋಲಿತ ಮತ್ತು ವೈವಿಧ್ಯಮಯ ಹೂಡಿಕೆ ಪೋರ್ಟ್‌ಫೋಲಿಯೊ ನಿರ್ಮಿಸಲು ನೆರವಾಗಲಿದೆ.

ದೀರ್ಘಾವಧಿಯ ಬಂಡವಾಳ ವೃದ್ಧಿಯನ್ನು ಗುರಿಯಾಗಿಸಿಕೊಂಡಿರುವ ಈ ಯೋಜನೆಯು ವಿವಿಧ ಆಸ್ತಿ ವರ್ಗಗಳಲ್ಲಿ ಹೂಡಿಕೆ ಮಾಡುವ ಮೂಲಕ ಅಪಾಯವನ್ನು ಸಮತೋಲನಗೊಳಿಸಿ ಉತ್ತಮ ಆದಾಯದ ಅವಕಾಶಗಳನ್ನು ಸೃಷ್ಟಿಸಲು ಉದ್ದೇಶಿಸಿದೆ.

ಸಾಂಪ್ರದಾಯಿಕ ಬಹು–ಆಸ್ತಿ ಹೂಡಿಕೆ ವಿಧಾನಗಳಿಗಿಂತ ಭಿನ್ನವಾಗಿ, ಆಲ್ಫಾಗ್ರೆಪ್ ಮಲ್ಟಿ ಅಸೆಟ್ ಅಲೊಕೇಶನ್ ಫಂಡ್ ಅಲ್ಗೊರಿದಮ್ ಆಧಾರಿತ ಹಾಗೂ ವ್ಯವಸ್ಥಿತ ಹೂಡಿಕೆ ಮಾದರಿಯನ್ನು ಅನುಸರಿಸಲಿದೆ.


ಮಾರುಕಟ್ಟೆಯ ಪರಿಸ್ಥಿತಿಗಳಿಗೆ ಅನುಗುಣವಾಗಿ ಪೋರ್ಟ್‌ಫೋಲಿಯೊ ಹಂಚಿಕೆಯನ್ನು ನಿರಂತರವಾಗಿ ಪರಿಷ್ಕರಿಸುವ ಮೂಲಕ ಹೂಡಿಕೆದಾರರಿಗೆ ದೀರ್ಘಕಾಲಿಕ ಮೌಲ್ಯ ಸೃಷ್ಟಿಸುವ ಗುರಿಯನ್ನು ಹೊಂದಿದೆ.

# ಡಿಸೇಬಲ್ಡ್ ಗಾಲ್ಫ್ ಮಾಸ್ಟರ್ಸ್‌ನಲ್ಲಿ ಭಾರತದ ಆಟಗಾರರಿಗೆ ಎರಡು ಪದಕ

ಜೆಕ್ ಗಣರಾಜ್ಯ

ಪ್ರೇಗ್‌ನಲ್ಲಿ ನಡೆದ ಪ್ರತಿಷ್ಠಿತ ಜೆಕ್ ಡಿಸೇಬಲ್ಡ್ ಗಾಲ್ಫ್ ಮಾಸ್ಟರ್ಸ್–2026 ಟೂರ್ನಿಯಲ್ಲಿ ಭಾರತದ ಇಬ್ಬರು ವಿಶೇಷಚೇತನ ಗಾಲ್ಫ್ ಆಟಗಾರರು ಐತಿಹಾಸಿಕ ಸಾಧನೆ ಮಾಡಿದ್ದು, ನೆಟ್ ಸ್ಟ್ರೋಕ್ ಪ್ಲೇ ವಿಭಾಗದಲ್ಲಿ ಎರಡು ಪದಕಗಳನ್ನು ಗೆದ್ದು ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ನೋಯ್ಡಾದ ವಿಷ್ಣುವರ್ಧನ್ ಭಾಟಿ ಅವರು ಒಟ್ಟಾರೆ 2 ಅಂಡರ್ ಪಾರ್ ಸ್ಕೋರ್ ದಾಖಲಿಸಿ ದ್ವಿತೀಯ ಸ್ಥಾನ ಪಡೆದು ರನ್ನರ್–ಅಪ್ ಆಗಿ ಹೊರಹೊಮ್ಮಿದರು. ಮೊದಲ ಸುತ್ತಿನಲ್ಲೇ 6 ಅಂಡರ್ ಪಾರ್ ಸಾಧನೆ ಮಾಡಿ ಅಗ್ರಸ್ಥಾನದಲ್ಲಿದ್ದ ಅವರು, ಅಂತಿಮ ಸುತ್ತಿನಲ್ಲೂ ಸ್ಥಿರ ಪ್ರದರ್ಶನ ನೀಡುವ ಮೂಲಕ ಎರಡನೇ ಸ್ಥಾನವನ್ನು ತಮ್ಮದಾಗಿಸಿಕೊಂಡರು.



ಬೆಂಗಳೂರು ಮೂಲದ ಅಂಕುಶ್ ಸಹಾ ಅವರು ಲೆವೆಲ್ ಪಾರ್ ಸ್ಕೋರ್‌ನೊಂದಿಗೆ ತೃತೀಯ ಸ್ಥಾನ ಗಳಿಸಿ ಕಂಚಿನ ಪದಕಕ್ಕೆ ಭಾಜನರಾದರು. ಮೊದಲ ಸುತ್ತಿನಲ್ಲಿ 10ನೇ ಸ್ಥಾನದಲ್ಲಿದ್ದ ಅವರು, ಎರಡನೇ ಸುತ್ತಿನಲ್ಲಿ ಅದ್ಭುತ ಆಟ ಪ್ರದರ್ಶಿಸಿ ನೇರವಾಗಿ ಮೂರನೇ ಸ್ಥಾನಕ್ಕೇರಿದರು.

ಭಾರತದಲ್ಲಿ ಅಡಾಪ್ಟಿವ್ ಗಾಲ್ಫ್ ಅಲೈಯನ್ಸ್ ಫೌಂಡೇಶನ್‌ನ ಪ್ರೋತ್ಸಾಹದಿಂದ ವಿಶೇಷಚೇತನರ ಗಾಲ್ಫ್ ಕ್ರೀಡೆಗೆ ಹೊಸ ಉತ್ತೇಜನ ದೊರೆಯುತ್ತಿದ್ದು, ಆಟಗಾರರ ಸಂಖ್ಯೆಯೂ ಹೆಚ್ಚುತ್ತಿದೆ. ಜೆನೆಸಿಸ್ ಐಟಿ ಇನ್ನೋವೇಷನ್ಸ್ ಸಂಸ್ಥೆಯ ಪ್ರಾಯೋಜಕತ್ವದಲ್ಲಿ ವಿಷ್ಣುವರ್ಧನ್ ಭಾಟಿ ಮತ್ತು ಅಂಕುಶ್ ಸಹಾ ಈ ಅಂತಾರಾಷ್ಟ್ರೀಯ ಟೂರ್ನಿಯಲ್ಲಿ ಭಾಗವಹಿಸಿದ್ದರು.

ಭಾರತೀಯ ಆಟಗಾರರ ಈ ಸಾಧನೆ ದೇಶದಲ್ಲಿ ಅಡಾಪ್ಟಿವ್ ಗಾಲ್ಫ್ ಬೆಳವಣಿಗೆಗೆ ಹೊಸ ಚೈತನ್ಯ ನೀಡಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಪ್ರತಿಭೆಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಮಿಂಚುವ ವಿಶ್ವಾಸ ಮೂಡಿಸಿದೆ.

ಈ ಕುರಿತು ಅಡಾಪ್ಟಿವ್ ಗಾಲ್ಫ್ ಅಲೈಯನ್ಸ್ ಫೌಂಡೇಶನ್ ನಿರ್ದೇಶಕ ಹಾಗೂ ಟಿಎಆರ್‌ಎಸ್ ಲೆವೆಲ್3 ನಿಯಮಗಳ ಅಧಿಕಾರಿ ಚಂದ್ರಶೇಖರ್ ಕಿನಿ ಮಾತನಾಡಿ, "ಗಾಲ್ಫ್ ಕೇವಲ ಒಂದು ಕ್ರೀಡೆಯಲ್ಲ. ಇದು ಎಲ್ಲರನ್ನೂ ಒಳಗೊಂಡು ಸಾಗುವ ವಿಶಿಷ್ಟ ಕ್ರೀಡೆಯಾಗಿದೆ. ವಿಶೇಷಚೇತನರು ಸೇರಿದಂತೆ ಈ ಆಟವನ್ನು ಅಳವಡಿಸಿಕೊಳ್ಳುವ ಪ್ರತಿಯೊಬ್ಬರ ಜೀವನದಲ್ಲೂ ಸಕಾರಾತ್ಮಕ ಬದಲಾವಣೆ ತರಬಲ್ಲ ಶಕ್ತಿ ಗಾಲ್ಫ್‌ಗೆ ಇದೆ" ಎಂದು ಹೇಳಿದರು.

# ಎಂಇಐಎಲ್ ಅನಲಾಗ್ ನಡುವೆ ಐತಿಹಾಸಿಕ ತಂತ್ರಜ್ಞಾನ ಪಾಲುದಾರಿಕೆ


ಹೈದರಾಬಾದ್

ಭಾರತದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ತಂತ್ರಜ್ಞಾನವನ್ನು ವಾಸ್ತವ ಜಗತ್ತಿನೊಂದಿಗೆ ಸಂಯೋಜಿಸುವ ಮಹತ್ವದ ಹೆಜ್ಜೆಯಾಗಿ, ಮೆಘಾ ಎಂಜಿನಿಯರಿಂಗ್ ಅಂಡ್ ಇನ್‌ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ (ಎಂಇಐಎಲ್) ಹಾಗೂ ಅನಲಾಗ್ ಸಂಸ್ಥೆಗಳು ಕಾರ್ಯತಂತ್ರದ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕಿವೆ. ಈ ಮೂಲಕ ದೇಶದಲ್ಲಿ 'ಭೌತಿಕ ಬುದ್ಧಿಮತ್ತೆ' (ಫಿಸಿಕಲ್ ಇಂಟೆಲಿಜೆನ್ಸ್) ತಂತ್ರಜ್ಞಾನದ ಹೊಸ ಯುಗಕ್ಕೆ ಚಾಲನೆ ದೊರೆತಿದೆ.

ಈ ಒಪ್ಪಂದದ ಮೂಲಕ ಯಂತ್ರಗಳು ತಮ್ಮ ಸುತ್ತಲಿನ ಪರಿಸರವನ್ನು ಗ್ರಹಿಸಿ, ಅರ್ಥಮಾಡಿಕೊಂಡು, ಅನುಭವದ ಆಧಾರದ ಮೇಲೆ ನಿರಂತರವಾಗಿ ಕಲಿಯುತ್ತಾ ಸ್ವಯಂ ನಿರ್ಧಾರಗಳನ್ನು ಕೈಗೊಳ್ಳುವ ಸಾಮರ್ಥ್ಯ ಹೊಂದುವ ತಂತ್ರಜ್ಞಾನವನ್ನು ಭಾರತದಲ್ಲಿ ವ್ಯಾಪಕವಾಗಿ ಅಳವಡಿಸುವ ಗುರಿ ಹೊಂದಲಾಗಿದೆ. ಇದು ಸಾಂಪ್ರದಾಯಿಕ ಪ್ರೋಗ್ರಾಮಿಂಗ್‌ನ ಮಿತಿಗಳನ್ನು ಮೀರಿ, ಪ್ರತಿಯೊಂದು ಅನುಭವದೊಂದಿಗೆ ಮತ್ತಷ್ಟು ಬುದ್ಧಿವಂತಿಕೆಯನ್ನು ಬೆಳೆಸಿಕೊಳ್ಳುವ ತಂತ್ರಜ್ಞಾನವಾಗಿದೆ.

ಪಾಲುದಾರಿಕೆಯಡಿ ಎಂಇಐಎಲ್ ತನ್ನ ಬಲಿಷ್ಠ ಮೂಲಸೌಕರ್ಯ ಅನುಭವ, ಕಾರ್ಯನಿರ್ವಹಣಾ ಸಾಮರ್ಥ್ಯ ಹಾಗೂ ದೇಶವ್ಯಾಪಿ ಜಾಲವನ್ನು ಒದಗಿಸಲಿದ್ದು, ಅನಲಾಗ್ ಸಂಸ್ಥೆ ಅತ್ಯಾಧುನಿಕ ಕೃತಕ ಬುದ್ಧಿಮತ್ತೆ ಮತ್ತು ಭೌತಿಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಒದಗಿಸಲಿದೆ. ಎರಡೂ ಸಂಸ್ಥೆಗಳು ಸೇರಿ ಮೂಲಸೌಕರ್ಯ, ಸಾರಿಗೆ, ಕೈಗಾರಿಕಾ ವ್ಯವಸ್ಥೆಗಳು, ಸಾರ್ವಜನಿಕ ಸುರಕ್ಷತೆ, ಸ್ಮಾರ್ಟ್ ನಗರಗಳು ಹಾಗೂ ಬುದ್ಧಿವಂತ ಕಾರ್ಯಾಚರಣೆಗಳ ಕ್ಷೇತ್ರಗಳಲ್ಲಿ ಕೆಲಸ ಮಾಡಲಿವೆ.

ಈ ಒಪ್ಪಂದವು ಭಾರತ ಮತ್ತು ಸಂಯುಕ್ತ ಅರಬ್ ಎಮಿರೇಟ್ಸ್ ನಡುವಿನ ತಂತ್ರಜ್ಞಾನ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಬೆಳವಣಿಗೆಯಾಗಿ ಪರಿಗಣಿಸಲಾಗಿದೆ.




ಎಂಇಐಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ವಿ. ಕೃಷ್ಣಾರೆಡ್ಡಿ ಮಾತನಾಡಿ, "ಮೂಲಸೌಕರ್ಯ ಅಭಿವೃದ್ಧಿಯೇ ದೇಶದ ಪ್ರಗತಿಯ ಆಧಾರ. ಮುಂದಿನ ದಿನಗಳಲ್ಲಿ ಮೂಲಸೌಕರ್ಯಗಳು ಬುದ್ಧಿವಂತ, ಪರಸ್ಪರ ಸಂಪರ್ಕಿತ ಹಾಗೂ ಪರಿಸ್ಥಿತಿಗೆ ಅನುಗುಣವಾಗಿ ಕಾರ್ಯನಿರ್ವಹಿಸುವಂತಿರಬೇಕು. ಅನಲಾಗ್ ಜೊತೆಗಿನ ಈ ಪಾಲುದಾರಿಕೆ ಆ ಗುರಿ ಸಾಧಿಸಲು ನೆರವಾಗಲಿದೆ. ಭಾರತಕ್ಕೆ ಭೌತಿಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಪರಿಚಯಿಸುವಲ್ಲಿ ನಾವು ಹೆಮ್ಮೆಪಡುತ್ತೇವೆ" ಎಂದು ಹೇಳಿದರು.

ಅನಲಾಗ್ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಲೆಕ್ಸ್ ಕಿಪ್‌ಮನ್ ಮಾತನಾಡಿ, "ಭಾರತವು ವಿಶ್ವದ ಪ್ರಮುಖ ತಂತ್ರಜ್ಞಾನ ಮಾರುಕಟ್ಟೆಗಳಲ್ಲಿ ಒಂದಾಗಿದೆ. ಇಲ್ಲಿನ ಎಂಜಿನಿಯರಿಂಗ್ ಪ್ರತಿಭೆ, ಮೂಲಸೌಕರ್ಯ ಅಭಿವೃದ್ಧಿಯ ಮಹತ್ವಾಕಾಂಕ್ಷೆ ಹಾಗೂ ಉದ್ಯಮಶೀಲತೆ ವಿಶ್ವದಲ್ಲೇ ವಿಶಿಷ್ಟವಾಗಿದೆ. ಭೌತಿಕ ಬುದ್ಧಿಮತ್ತೆ ತಂತ್ರಜ್ಞಾನಕ್ಕೆ ಭಾರತ ಅತ್ಯುತ್ತಮ ವೇದಿಕೆ. ಈ ಕನಸನ್ನು ಸಾಕಾರಗೊಳಿಸಲು ಎಂಇಐಎಲ್ ಸೂಕ್ತ ಪಾಲುದಾರವಾಗಿದ್ದು, ನಾವು ಸೇರಿ ಹೊಸ ಭವಿಷ್ಯವನ್ನು ನಿರ್ಮಿಸುತ್ತಿದ್ದೇವೆ" ಎಂದು ತಿಳಿಸಿದರು.

ಪಾಲುದಾರಿಕೆಯಡಿ ಬುದ್ಧಿವಂತ ಮೂಲಸೌಕರ್ಯ, ಸ್ಮಾರ್ಟ್ ನಗರ ವ್ಯವಸ್ಥೆಗಳು, ಸುಧಾರಿತ ಸಂವೇದಕ ತಂತ್ರಜ್ಞಾನ, ಕಾರ್ಯಾಚರಣಾ ಬುದ್ಧಿಮತ್ತೆ, ರೋಬೋಟಿಕ್ಸ್, ಸ್ಪೇಷಿಯಲ್ ಕಂಪ್ಯೂಟಿಂಗ್, ಕೈಗಾರಿಕಾ ಪರಿವರ್ತನೆ, ಸಾರ್ವಜನಿಕ ಸುರಕ್ಷತೆ ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ವಾಸ್ತವ ಜಗತ್ತಿನ ಅನ್ವಯಿಕೆಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತದೆ.

ಇದರೊಂದಿಗೆ ಭಾರತದಲ್ಲಿ ತಂತ್ರಜ್ಞಾನ ಕೌಶಲ್ಯ ವೃದ್ಧಿ, ಪ್ರತಿಭಾ ಅಭಿವೃದ್ಧಿ ಹಾಗೂ ನವೋದ್ಯಮ ಪರಿಸರ ನಿರ್ಮಾಣಕ್ಕೂ ಎರಡೂ ಸಂಸ್ಥೆಗಳು ದೀರ್ಘಾವಧಿಯ ಹೂಡಿಕೆ ಮಾಡಲು ಮುಂದಾಗಿವೆ. ಈ ಬೆಳವಣಿಗೆ ಭಾರತವನ್ನು ಜಾಗತಿಕ ಮಟ್ಟದ ಉನ್ನತ ತಂತ್ರಜ್ಞಾನ ಹೂಡಿಕೆ ಕೇಂದ್ರವಾಗಿ ಮತ್ತಷ್ಟು ಬಲಪಡಿಸುವ ನಿರೀಕ್ಷೆ ಮೂಡಿಸಿದೆ. ಜೊತೆಗೆ, ತೆಲಂಗಾಣ ರೈಸಿಂಗ್ ಗ್ಲೋಬಲ್ ಸಮಿಟ್‌ನಲ್ಲಿ ನಡೆದ ಒಪ್ಪಂದಗಳ ಬಳಿಕ ಭಾರತದಲ್ಲಿ ಅನಲಾಗ್ ಸಂಸ್ಥೆಯ ತಂತ್ರಜ್ಞಾನ ವಿಸ್ತರಣೆಗೆ ಹೊಸ ವೇಗ ದೊರೆತಿದೆ. ಹೈದರಾಬಾದ್ ಕೇಂದ್ರ ಕಚೇರಿಯನ್ನು ಹೊಂದಿರುವ ಎಂಇಐಎಲ್, ಕಳೆದ ಮೂರು ದಶಕಗಳಿಂದ ನೀರಾವರಿ, ವಿದ್ಯುತ್, ಸಾರಿಗೆ, ಹೈಡ್ರೋಕಾರ್ಬನ್ ಹಾಗೂ ಉತ್ಪಾದನಾ ವಲಯಗಳಲ್ಲಿ ದೇಶೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಬೃಹತ್ ಮೂಲಸೌಕರ್ಯ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿರುವ ಭಾರತದ ಪ್ರಮುಖ ಎಂಜಿನಿಯರಿಂಗ್ ಸಂಸ್ಥೆಯಾಗಿದೆ.

ಅಬುಧಾಬಿ ಕೇಂದ್ರ ಕಚೇರಿಯನ್ನು ಹೊಂದಿರುವ ಅನಲಾಗ್ ಸಂಸ್ಥೆ, ಜಿ–42 ಹೂಡಿಕೆ ಬೆಂಬಲದೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಜನರು, ಸ್ಥಳಗಳು ಮತ್ತು ವಸ್ತುಗಳನ್ನು ಒಂದೇ ಬುದ್ಧಿವಂತ ಜಾಲದಲ್ಲಿ ಸಂಪರ್ಕಿಸುವ ಭೌತಿಕ ಬುದ್ಧಿಮತ್ತೆ ತಂತ್ರಜ್ಞಾನ ಅಭಿವೃದ್ಧಿಯಲ್ಲಿ ತೊಡಗಿದೆ. ಸ್ಮಾರ್ಟ್ ನಗರಗಳು, ಸ್ವಯಂಚಾಲಿತ ಮೂಲಸೌಕರ್ಯ, ರೋಬೋಟಿಕ್ಸ್ ಹಾಗೂ ಇಮರ್ಸಿವ್ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸರ್ಕಾರಗಳು ಮತ್ತು ಜಾಗತಿಕ ಸಂಸ್ಥೆಗಳೊಂದಿಗೆ ಕೈಜೋಡಿಸಿ ಕಾರ್ಯನಿರ್ವಹಿಸುತ್ತಿದೆ.

ಪಾಲುದಾರಿಕೆಯಡಿ ಬುದ್ಧಿವಂತ ಮೂಲಸೌಕರ್ಯ, ಸ್ಮಾರ್ಟ್ ನಗರ ವ್ಯವಸ್ಥೆಗಳು, ಸುಧಾರಿತ ಸಂವೇದಕ ತಂತ್ರಜ್ಞಾನ, ಕಾರ್ಯಾಚರಣಾ ಬುದ್ಧಿಮತ್ತೆ, ರೋಬೋಟಿಕ್ಸ್, ಸ್ಪೇಷಿಯಲ್ ಕಂಪ್ಯೂಟಿಂಗ್, ಕೈಗಾರಿಕಾ ಪರಿವರ್ತನೆ, ಸಾರ್ವಜನಿಕ ಸುರಕ್ಷತೆ ಹಾಗೂ ಕೃತಕ ಬುದ್ಧಿಮತ್ತೆ ಆಧಾರಿತ ವಾಸ್ತವ ಜಗತ್ತಿನ ಅನ್ವಯಿಕೆಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತದೆ. ಇದರೊಂದಿಗೆ ಭಾರತದಲ್ಲಿ ತಂತ್ರಜ್ಞಾನ ಕೌಶಲ್ಯ ವೃದ್ಧಿ, ಪ್ರತಿಭಾ ಅಭಿವೃದ್ಧಿ ಹಾಗೂ ನವೋದ್ಯಮ ಪರಿಸರ ನಿರ್ಮಾಣಕ್ಕೂ ಎರಡೂ ಸಂಸ್ಥೆಗಳು ದೀರ್ಘಾವಧಿಯ ಹೂಡಿಕೆ ಮಾಡಲು ಮುಂದಾಗಿವೆ.

